4. ವಿತ್ತೀಯ ಕಾರ್ಯಕಲಾಪ

ಅ) 2005–06 ನೇ ಸಾಲಿನ ಅನುದಾನ ಬೇಡಿಕೆಗಳಿಗೆ ಅಂಗೀಕಾರ

(ಬೇಡಿಕೆ ಸಂಖ್ಯೆ 17 – ಶಿಕ್ಷಣ ಮತ್ತು ಬೇಡಿಕೆ ಸಂಖ್ಯೆ 23 – ಕಾರ್ಮಿಕ)

ಅಧ್ಯಕ್ಷರು :– ಈಗ ನಾನು ಬೇಡಿಕೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಏನೆಂದರೆ :

"ದಿನಾಂಕ 31–03–2006 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಬೇಡಿಕೆ ಸಂಖ್ಯೆ 17 ಕ್ಕೆ ಸಂಬಂಧಿಸಿದಂತೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗಳನ್ನೂ ಸೇರಿ ಬೇಡಿಕೆ ಪಟ್ಟಿಯಲ್ಲಿ ನಮೂದಿಸಿದ ಮೊಬಲಿಗೆ ಮೀರದ ಮೊತ್ತವನ್ನೂ (ಲೇಖಾನುದಾನದಲ್ಲಿ ಮಂಜೂರಾದ ಮೊತ್ತದಲ್ಲಿ ಸೇರಿದಂತೆ ಮಂಜೂರು ಮಾಡುವುದು"

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಯನ್ನು ಮಂಜೂರು ಮಾಡಲಾಯಿತು.

(ಮಾನ್ಯ ಅಧ್ಯಕ್ಷರ ಮೇರೆಗೆ ಮಂಜೂರಾದ ಬೇಡಿಕೆಯನ್ನು ಈ ಕೆಳಗೆ ನಮೂದಿಸಲಾಗಿದೆ)

ಅಭಿಯಾಚನೆ ಕ್ರಮಾಂಕ 17–ಶಿಕ್ಷಣ

"ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–03–2005 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ " ಶಿಕ್ಷಣ" ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 483567.95 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 5,146.94 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು"

– – – – – –

(ಗೊಂದಲ)

(ಧರಣಿ ನಿರತ ಸದಸ್ಯರು ಘೋಷಣೆಗಳನ್ನು ತ್ತಿದ್ದರು)

ಅನುದಾನದ ಬೇಡಿಕೆಗಳು 2005–06

ಅಧ್ಯಕ್ಷರು :– ಈಗ ನಾನು ಬೇಡಿಕೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಏನೆಂದರೆ :

"ದಿನಾಂಕ 31–03–2006 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಬೇಡಿಕೆ ಸಂಖ್ಯೆ 23 ಕ್ಕೆ ಸಂಬಂಧಿಸಿದಂತೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ ಬೇಡಿಕೆ ಪಟ್ಟಿಯಲ್ಲಿ ನಮೂದಿಸಿದ ಮೊಬಲಿಗೆ ಮೀರದ ಮೊತ್ತವನ್ನೂ (ಲೇಖಾನುದಾನ ದಲ್ಲಿ ಮಂಜೂರಾದ ಮೊತ್ತದಲ್ಲಿ ಸೇರಿದಂತೆ ಮಂಜೂರು ಮಾಡುವುದು"

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಯನ್ನು ಮಂಜೂರು ಮಾಡಲಾಯಿತು.

(ಮಾನ್ಯ ಅಧ್ಯಕ್ಷರ ಮೇರೆಗೆ ಮಂಜೂರಾದ ಬೇಡಿಕೆಯನ್ನು ಈ ಕೆಳಗೆ ನಮೂದಿಸಲಾಗಿದೆ)

ಅಭಿಯಾಚನೆ ಕ್ರಮಾಂಕ 23 – ಕಾರ್ಮಿಕ

"ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–03–2005 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ " ಕಾರ್ಮಿಕ" ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 10853.98 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು"

– – – – – –

(ಗೊಂದಲ)

(ಧರಣಿ ನಿರತ ಸದಸ್ಯರು ಬಾವಿಯಲ್ಲಿ ನಿಂತು ಘೋಷಣೆಗಳನ್ನು ಕೂಗುತ್ತಿದ್ದರು)

ಅಧ್ಯಕ್ಷರು :- ಈಗ 2005-06 ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಚರ್ಚೆ, ಉತ್ತರ ಹಾಗೂ ಮತಕ್ಕೆ ಹಾಕುವುದು, ಮಂತ್ರಿಗಳೇ ಅದನ್ನು ಮಂಡಿಸಿ.

(ಗೊಂದಲ)

(ಅ) ಅನುದಾನ ಬೇಡಿಕೆ ಮಂಡನೆ

ಬೇಡಿಕೆ ಸಂಖ್ಯೆ : 9 – ಸಹಕಾರ

ಶ್ರೀ ಆರ್.ವಿ. ದೇಶ್‌ಪಾಂಡೆ (ಸಹಕಾರ ಖಾತೆ ಸಚಿವರು):- ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-03-2006 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಹಕಾರ" ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 61,725.25 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 299.55 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ...

ಪ್ರಸ್ತಾವವನ್ನು ಮಂಡಿಸಲಾಯಿತು

\- - - - -

(ಗೊಂದಲ)

ಅಧ್ಯಕ್ಷರು :- ಈಗ ಸದನವನ್ನು ಒಂದು ಗಂಟೆಗಳ ಕಾಲ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 12 : 15 ಕ್ಕೆ ಮುಂದೂಡಲ್ಪಟ್ಟು ಪುನಃ ಒಂದು ಗಂಟೆಯ ಬಳಿಕ ಸೇರಲು ನಿಶ್ಚಯಿಸಿತು)

\- - - - -

(ಸದನವು ಪುನಃ ಮಧ್ಯಾಹ್ನ 1 ಗಂಟೆ 19 ನಮಿಷಕ್ಕೆ ಸಮಾವೇಶಗೊಂಡಿತು)

(ಮಾನ್ಯ ಸಭಾಧ್ಯಕ್ಷರು ಶ್ರೀ ಕೃಷ್ಣರವರು ಅಧ್ಯಕ್ಷ ಪೀಠವನ್ನಲಂಕರಿಸಿದರು)

(ಸದನದ ಬಾವಿಯಲ್ಲಿ ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು ಧರಣಿ ನಿರತರಾಗಿದ್ದರು)